ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ಕೃಷಿ ಅವಲಂಬಿತ ರೈತರಿಗೆ ನೀಡುವ ಯೋಜನೆಗಳ ಕುರಿತು

ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :-

639 (858) ಮಾನ್ಯ ಕೃಷಿ ಸಚಿವರು ಈ ವಿಷಯಗಳÀನ್ನು ದಯವಿಟ್ಟು ತಿಳಿಸುವರೆ:-

(ಅ) ಕೃಷಿಯನ್ನು ಅವಲಂಬಿಸಿರುವ ರೈತ ಕುಟುಂಬಗಳ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸಲು ಸರ್ಕಾರ ಯಾವ ಯೋಜನೆಗಳನ್ನು ರೂಪಿಸಿದೆ ;

(ಆ) ಸರ್ಕಾರದಿಂದ ಉಚಿತವಾಗಿ ನೀಡಲಾಗಿರುವ ಬಿತ್ತನೆ ಬೀಜಗಳು ಹಾಗೂ ರಾಸಾಯನಿಕ ಗೊಬ್ಬರ ಮತ್ತು ಸಾವಯವ ಗೊಬ್ಬರಗಳಿಗೆ ಪ್ರಸಕ್ತ ಸಾಲಿನಲ್ಲಿ ಎಷ್ಟು ಅನುದಾನವನ್ನು ನಿಗದಿಪಡಿಸಲಾಗಿದೆ ; (ಜಿಲ್ಲಾವಾರು/ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಕೆಲವು ಕಂಪನಿಗಳು ರೈತರಿಗೆ ಕಲಬೆರಕೆ ಬಿತ್ತನೆ ಬೀಜಗಳನ್ನು ಪೂರೈಸುತ್ತಿದ್ದು, ಈ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಈ) ಎರೆಹುಳು ಗೊಬ್ಬರಕ್ಕೆ ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ ಮತ್ತು ಕೃಷಿ ವಿಶ್ವವಿದ್ಯಾಲಯದಲ್ಲಿ ಬೇರೆ ದರಗಳನ್ನು ನಿಗದಿ ಮಾಡಿ ಮಾರಾಟ ಮಾಡುತ್ತಿರುವ ಹಾಗೂ ತಾರತಮ್ಯ ಹೊಂದಿರುವ ಬಗ್ಗೆ ಮಾಹಿತಿ ನೀಡುವುದು ;

(ಉ) ರೈತರಿಗೆ ರಿಯಾಯಿತಿ ದರದಲ್ಲಿ ಕೃಷಿ ಯಂತ್ರೋಪಕರಣಗಳನ್ನು ಪಡೆದುಕೊಳ್ಳಲು ಇರುವ ಮಾನದಂಡಗಳೇನು ?

(ಇ) ಕೆಲವು ಕಂಪನಿಗಳು ರೈತರಿಗೆ ಕಲಬೆರಕೆ ಬಿತ್ತನೆ ಬೀಜಗಳನ್ನು ಪೂರೈಸುತ್ತಿದ್ದು, ಈ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಈ) ಎರೆಹುಳು ಗೊಬ್ಬರಕ್ಕೆ ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ ಮತ್ತು ಕೃಷಿ ವಿಶ್ವವಿದ್ಯಾಲಯದಲ್ಲಿ ಬೇರೆ ದರಗಳನ್ನು ನಿಗದಿ ಮಾಡಿ ಮಾರಾಟ ಮಾಡುತ್ತಿರುವ ಹಾಗೂ ತಾರತಮ್ಯ ಹೊಂದಿರುವ ಬಗ್ಗೆ ಮಾಹಿತಿ ನೀಡುವುದು ;

(ಉ) ರೈತರಿಗೆ ರಿಯಾಯಿತಿ ದರದಲ್ಲಿ ಕೃಷಿ ಯಂತ್ರೋಪಕರಣಗಳನ್ನು ಪಡೆದುಕೊಳ್ಳಲು ಇರುವ ಮಾನದಂಡಗಳೇನು ?